## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 976 |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ |
| ಉತ್ತರಿಸುವ ದಿನಾಂಕ | 11.03.2026 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಮುಜರಾಯಿ ಇಲಾಖೆಯಿಂದ 'ಕಾಶಿ' ಯಾತ್ರೆ ಮಾದರಿಯಲ್ಲಿಯೇ 'ವೈಷ್ಣೋದೇವಿ' ಯಾತ್ರೆಗೂ ಸಹಾಯಧನ ನೀಡಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ಸದರಿ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಸದರಿ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ; | ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.30,000/- ಹಾಗೂ ಚಾರ್‌ಧಾಮ್ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.20,000/- ಹಾಗೂ ಕಾಶಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಸಹಾಯಧನವನ್ನು ಸರ್ಕಾರದಿಂದ ನೀಡಲಾಗುತ್ತಿದೆ.<br><br>ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಭೇಟಿ ನೀಡುವ 45 ವರ್ಷಗಳ ಮೇಲ್ಪಟ್ಟ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಗಳ ಸಹಾಯಧನವನ್ನು ವಿತರಿಸುವ ಯೋಜನೆಯನ್ನು ಜಾರಿಗೆ ತರಲು ದಿನಾಂಕ:13.11.2024ರಂದು ನಡೆದ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.<br><br>ಮುಂದುವರೆದು, 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ (441) ರಲ್ಲಿ ಈ ಕೆಳಕಂಡಂತೆ ಘೋಷಣೆಯಾಗಿರುತ್ತದೆ.<br><br>**" ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5,000 ರೂ.ಗಳ ಸಹಾಯಧನವನ್ನು ಡಿ.ಬಿ.ಟಿ ಮೂಲಕ ವಿತರಿಸಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕೆ ಐದು ಕೋಟಿ ರೂ. ಅನುದಾನ ಮೀಸಲಿರಿಸಿದೆ.**<br><br>ಅದರಂತೆ, ಉದ್ದೇಶಿತ "ಶ್ರೀ ಮಾತಾ ವೈಷ್ಣೋದೇವಿ" ಯಾತ್ರೆ ಯೋಜನೆಯನ್ನು 2026-27ನೇ ಸಾಲಿನಿಂದ ಅನುಷ್ಠಾನಗೊಳಿಸಿ ಶ್ರೀ ವೈಷ್ಣೋದೇವಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸಹಾಯಧನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತದೆ. |
| ಆ) | 'ವೈಷ್ಣೋದೇವಿ' ಯಾತ್ರೆಗೆ ಸಹಾಯಧನ ನೀಡುವ ಕುರಿತು ಸರ್ಕಾರ ಇದುವರೆಗೆ ಕ್ರಮ ವಹಿಸದಿರಲು ಕಾರಣಗಳೇನು; | |
| ಇ) | ಯಾವ ಕಾಲಮಿತಿಯೊಳಗೆ 'ಕಾಶಿ' ಯಾತ್ರೆ ಮಾದರಿಯಲ್ಲಿಯೇ 'ವೈಷ್ಣೋದೇವಿ' ಯಾತ್ರೆಗೆ ಸಹಾಯಧನ ನೀಡುವ ಯೋಜನೆ ಜಾರಿಗೊಳಿಸಲಾಗುವುದು? | |

ಸಂಖ್ಯೆ: ಕಂಇ 34 ಮುಸಪ್ರ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು